# ತುಮಕೂರು ವಿಶ್ವವಿದ್ಯಾನಿಲಯ

ವಿಶ್ವವಿದ್ಯಾನಿಲಯ ಕಾರ್ಯಾಲಯ, ಬಿ.ಎಚ್.ರಸ್ತೆ, ತುಮಕೂರು - 572 103

ಸಂಖ್ಯೆ:ತುವಿ:ಶೈವಿ:2022-23:/6190

ದಿನಾಂಕ:10.03.2023

## ಸುತ್ತೋಲೆ

ವಿಷಯ: Infosys Springboard ಕುರಿತು ತರಬೇತಿ ಕಾರ್ಯಾಗಾರ ಏರ್ಪಡಿಸಿರುವ ಬಗ್ಗೆ.
ಉಲ್ಲೇಖ: ಮಾನ್ಯ ಕುಲಪತಿಯವರ ಅನುಮೋದನೆ ದಿನಾಂಕ: 10.03.2023.

* * *

Infosys Springboard ಹಲವಾರು ಆನ್‌ಲೈನ್ ಕೋರ್ಸ್‌ಗಳನ್ನು ನೀಡುವ ವೇದಿಕೆಯಾಗಿದ್ದು, ಈ ಸಂಬಂಧ ತುಮಕೂರು ವಿಶ್ವವಿದ್ಯಾನಿಲಯ ಶೈಕ್ಷಣಿಕ ಒಡಂಬಡಿಕೆ ಮಾಡಿಕೊಂಡಿದೆ. ಈ ವೇದಿಕೆಯಲ್ಲಿ ವಿದ್ಯಾರ್ಥಿಗಳ ಕೌಶಲ್ಯಾಭಿವೃದ್ಧಿಗೆ ಅನುಕೂಲವಾಗುವ ಕೋರ್ಸ್‌ಗಳು ಲಭ್ಯವಿದ್ದು, ತುಮಕೂರು ವಿಶ್ವವಿದ್ಯಾನಿಲಯದ ವಿದ್ಯಾರ್ಥಿಗಳಿಗೆ ಅನುಕೂಲವಾಗುವಂತೆ, Infosys Springboardನ ತುಮಕೂರು ವಿಶ್ವವಿದ್ಯಾನಿಲಯದ Microsite ಅಭಿವೃದ್ಧಿಯಾಗಿದೆ. ಈ ಹಿನ್ನೆಲೆಯಲ್ಲಿ ತುಮಕೂರು ವಿಶ್ವವಿದ್ಯಾನಿಲಯದ ಸ್ನಾತಕೋತ್ತರ ಅಧ್ಯಯನ ವಿಭಾಗಗಳ ಮುಖ್ಯಸ್ಥರು / ಸಂಯೋಜಕರು ಹಾಗೂ ಸಂಯೋಜಿತ ಮತ್ತು ಘಟಕ ಕಾಲೇಜುಗಳ ಪ್ರಾಂಶುಪಾಲರುಗಳು, ತಮ್ಮ ಕಾಲೇಜುಗಳ ರಾಷ್ಟ್ರೀಯ ಶಿಕ್ಷಣ ನೀತಿ 2020ರ ಸಂಯೋಜಕರು ಹಾಗೂ ಪ್ಲೇಸ್‌ಮೆಂಟ್ ಆಫೀಸರ್‌ಗಳ ಜೊತೆಗೆ ಪ್ರತಿ ಕಾಲೇಜಿನಿಂದ ಕನಿಷ್ಠ ಇಬ್ಬರಂತೆ ಕಡ್ಡಾಯವಾಗಿ ದಿನಾಂಕ:21.03.2023 ರಂದು ನಡೆಯಲಿರುವ ತರಬೇತಿ ಕಾರ್ಯಾಗಾರದಲ್ಲಿ ಭಾಗವಹಿಸಲು ತಿಳಿಸಿದೆ.

**ಸ್ಥಳ : ಸರ್.ಎಂ. ವಿಶ್ವೇಶ್ವರಯ್ಯ ಸಭಾಂಗಣ**

**ಸಮಯ : ಬೆಳಿಗ್ಗೆ 10-00 ಗಂಟೆ**

ಕರಡು ಪತ್ರವು ಮಾನ್ಯಕುಲಸಚಿವರಿಂದ ಅನುಮೋದಿಸಲ್ಪಟ್ಟಿದೆ.

ಆದೇಶದ ಮೇರೆಗೆ,
Mangalagowri M
ಉಪಕುಲಸಚಿವರು
ಉಪಕುಲ ಸಚಿವರು
ಶೈಕ್ಷಣಿಕ ವಿಭಾಗ
ತುಮಕೂರು ವಿಶ್ವವಿದ್ಯಾಲಯ
ತುಮಕೂರು

ಗೆ,

1. ಮುಖ್ಯಸ್ಥರು/ಸಂಯೋಜಕರು, ಸ್ನಾತಕೋತ್ತರ ಅಧ್ಯಯನ ಮತ್ತು ಸಂಶೋಧನ ವಿಭಾಗಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
2. ಪ್ರಾಂಶುಪಾಲರು, ಘಟಕ ಮತ್ತು ಸಂಯೋಜಿತ ಕಾಲೇಜುಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.

ಪ್ರತಿಗಳು:

1. ಮಾನ್ಯ ಕುಲಪತಿಗಳ ಆಪ್ತ ಕಾರ್ಯದರ್ಶಿಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
2. ಸಿಸ್ಟಂ ಅನಾಲಿಸ್ಟ್, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು-ವೆಬ್ ಸೈಟ್‌ನಲ್ಲಿ ಪ್ರಕಟಿಸುವುದು ಹಾಗೂ ಇ-ಮೇಲ್ ಕಳುಹಿಸುವುದು.
3. ಕಛೇರಿ ಪ್ರತಿ.